ಅ) ಬೀದರ್‌ನಲ್ಲಿ ಶಿಶು ಮಾರಾಟ ಪ್ರಕರಣದ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸಿದ್ದಾರೆಯೇ? ಸಲ್ಲಿಸಿದ್ದರೆ ಯಾವಾಗ ಸಲ್ಲಿಸಲಾಯಿತು?

ಆ) ವರದಿಯಲ್ಲಿ, ಪ್ರಕರಣದಲ್ಲಿ ಭಾಗಿಯಾದವರನ್ನು ಗುರುತಿಸಲಾಗಿದೆಯೇ? ಗುರುತಿಸಿದ ವ್ಯಕ್ತಿ / ಸಂಸ್ಥೆಗಳು ಯಾವುವು?

ಇ) ಈ ವರದಿಯ ಆಧಾರದ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ? ಕ್ರಮ ಕೈಗೊಳ್ಳದಿದ್ದಲ್ಲಿ ಕಾರಣವೇನು? ಯಾವಾಗ ಕೈಗೊಳ್ಳಲಾಗುವುದು?

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು)

ಅ) ಬೀದರ್‌ನಲ್ಲಿ ಶಿಶು ಮಾರಾಟ ಪ್ರಕರಣ ನಡೆದಿಲ್ಲ. ಉದ್ಭವಿಸುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಹೊಸನಗರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಶಿಫಾರಸ್ಸು ಕುರಿತು

4196 (4946) : ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹೊಸನಗರ ಕೃಷಿ ಉತ್ಪನ್ನ ಉಪ ಮಾರುಕಟ್ಟೆಯನ್ನು ಸಾಗರ ಮಾರುಕಟ್ಟೆಯಿಂದ ಬೇರ್ಪಡಿಸಿ ಸ್ವತಂತ್ರ ಮಾರುಕಟ್ಟೆಯಿಂದ ಬೇರ್ಪಡಿಸಿ ಸ್ವತಂತ್ರ ಮಾರುಕಟ್ಟೆಯನ್ನಾಗಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಈ ಬಗ್ಗೆ ಸಾಗರ ಮಾರುಕಟ್ಟೆ ಸಮಿತಿ ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕಳುಹಿಸಿದೆಯೇ;

ಇ) ಹೊಸನಗರ ಮಾರುಕಟ್ಟೆ ಅಭಿವೃದ್ಧಿ ದೃಷ್ಟಿಯಿಂದ ಅದರಲ್ಲೂ ವಿಶೇಷವಾಗಿ ಅಡಿಕೆ ಬೆಳೆಗಾರರ ಹಿತದೃಷ್ಟಿಯನ್ನು ಗಮನದಲ್ಲಿಟ್ಟು ಸರ್ಕಾರ ತೀರ್ಮಾನ ಕೈಗೊಳ್ಳುವುದೇ; ಯಾವಾಗ;

ಶ್ರೀ ಹೆಚ್. ವಿಶ್ವನಾಥ್ (ಸಹಕಾರ ಸಚಿವರು)

ಅ) ಹೌದು.

ಆ) ಹೌದು.

ಇ) ಆರ್ಥಿಕ ಕಾರ್ಯಸಾಧ್ಯತೆಯು ಪ್ರಮುಖ ಮಾನದಂಡವಾಗಿದ್ದು, ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ.

ತುಂಗಾ ಮೇಲ್ದಂಡೆ ಯೋಜನೆಯ ನಿರಾಶ್ರಿತ ಕುಟುಂಬಗಳ ಮಾಹಿತಿ ಬಗ್ಗೆ

4197 (4947) : ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಶಿವಮೊಗ್ಗ ಜಿಲ್ಲೆಯಲ್ಲಿ ಜಾರಿಯಾಗಿರುವ ಯೋಜನೆಗಳಿಂದ ನಿರಾಶ್ರಿತರಾಗಿರುವ (ಸಂತ್ರಸ್ಥರ) ಕುಟುಂಬಗಳ ಸಂಖ್ಯೆ ಎಷ್ಟು;

ಆ) ತುಂಗಾ ಮೇಲ್ದಂಡೆ ಯೋಜನೆಯಿಂದ ನಿರಾಶ್ರಿತರ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇದೆಯೇ;

ಇ) ತುಂಗಾ ಮೇಲ್ದಂಡೆಗಾಗಿ ವೆಚ್ಚ ಮಾಡಲಿರುವ ಹಣ ಎಷ್ಟು; ಕಾಮಗಾರಿ ಯಾವ ಹಂತದಲ್ಲಿದೆ; ಯಾವಾಗ ಪೂರ್ಣಗೊಳ್ಳುತ್ತದೆ;

ಈ) ಈ ಯೋಜನೆಯಿಂದ ಜಿಲ್ಲೆಯ ಹಗೂ ಸಉತ್ತಮುತ್ತಲಿನ ಎಷ್ಟು ಗ್ರಾಮಗಳು ಮುಳುಗಡೆಯಾಗಲಿವೆ:

ಉ) ಪುನರ್ವಸತಿ ಕೆಂದ್ರ ನಿರ್ಮಾಣ ಕಾಮಗಾರಿಗೆ ಎಷ್ಟು ಹಣ ನಿಗದಿಪಡಿಸಲಾಗಿದೆ: ಇದುವರೆಗೆ ಬಿಡುಗಡೆಯಾದ ಹಣ ಎಷ್ಟು?

ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು)

ಅ) ಶಿವಮೊಗ್ಗ ಜಿಲ್ಲೆಯ ತುಂಗಾ ಅಣೆಕಟ್ಟು ಯೋಜನೆಯು 1946 ರಲ್ಲಿ ಪ್ರಾರಂಭಿಸಿ 1956 ರಲ್ಲಿ ಪೂರ್ಣಗೊಂಡಿರುತ್ತದೆ. ಈ ಯೋಜನೆಯಿಂದ 120 ಮನೆಗಳು ಮುಳುಗಡೆಯಾಗಿದ್ದು. ಈ ಕುಟುಂಬಗಳಿಗೆ ಪುನರ್ವಸತಿ ಕಲ್ಪಿಸಲಾಗಿದೆ.

ಆ) ಇದೆ.

ಇ) ಮಾರ್ಪಾಡಿತ ಯೋಜನಾ ವರದಿಯಂತೆ ಅಂದಾಜು ವೆಚ್ಚವು ರೂ. 1052.33 ಕೋಟಿ. ಯೋಜನೆಯ ಕಾಮಗಾರಿಗಳು ಪ್ರಗತಿಯ ವಿವಿಧ ಹಂತದಲ್ಲಿವೆ. ಈ ಯೋಜನೆಯನ್ನು 2005 ರ ಅಂತ್ಯದೊಳಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ.

ಈ) ಶಿವಮೊಗ್ಗ ಜಿಲ್ಲೆಯ ಎರಡು ಗ್ರಾಮಗಳು ಮುಳುಗಡೆಯಿಂದ ಭಾಗಶಃ ತೊಂದರೆಗೊಳಗಾಗುತ್ತವೆ ಮತ್ತು ಮೂರು ಗ್ರಾಮಗಳ 214ಎ–07 ಗುಂ ಜಮೀನುಗಳು ಮುಳುಗಡೆಯಾಗುತ್ತವೆ ಚಿಕ್ಕಮಗಳೂರು ಜಿಲ್ಲೆಯ ಎರಡು ಗ್ರಾಮಗಳ 105ಎ.– 22ಗುಂ. ಜಮೀನುಗಳು ಮುಳುಗಡೆಯಾಗುತ್ತವೆ.

ಉ) ಪುನರ್ವಸತಿ ಕೆಂದ್ರ ನಿರ್ಮಾಣ ಕಾಮಗಾರಿಗೆ ರೂ. 350.00 ಲಕ್ಷ ನಿಗದಿಪಡಿಸಲಾಗಿದೆ. ಇದುವರೆಗೆ ಪುನರ್ವಸತಿ ಕೆಂದ್ರದ ನಿರ್ಮಾಣ ಕಾರ್ಯಕ್ಕಾಗಿ ಯಾವುದೇ ವೆಚ್ಚ ಭರಿಸಲಾಗಿಲ್ಲ.

ರಾಷ್ಟ್ರದಲ್ಲಿ ರೈತ ಸಂಪರ್ಕ ಕೇಂದ್ರಗಳಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ

4198 (4948) : ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ರೈತ ಸಂಪರ್ಕ ಕೆಂದ್ರಗಳ ಸಂಖ್ಯೆ ಎಷ್ಟು:

ಆ) ಪ್ರತಿಯೊಂದು ರೈತ ಸಂಪರ್ಕ ಕೇಂದ್ರಕ್ಕೆ ಮಂಜೂರಾದ ಹುದ್ದೆಗಳು ಯಾವುವು:

ಇ) ರೈತ ಸಂಪರ್ಕ ಕೇಂದ್ರಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು: (ಹುದ್ದವಾರು, ಜಿಲ್ಲಾವಾರು ವಿವರ ಒದಗಿಸುವುದು)

ಈ) ಈ ರೈತ ಸಂಪರ್ಕ ಕೇಂದ್ರಗಳಲ್ಲಿ ತೋಟಗಾರಿಕೆ, ಕೃಷಿ, ರೇಷ್ಮೆ ಮತ್ತು ಪಶುಸಂಗೋಪನೆ ವಿಸ್ತರಣಾ ಯೋಜನೆಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗಿದೆಯೆ:

ಉ) ಈ ಕೇಂದ್ರಗಳಿಗೆ ಭೂಮಿ, ಕೃಷಿ ಉತ್ಪನ್ನ ಮಾರುಕಟ್ಟೆ, ಸಹಕಾರ ಸಂಘಗಳು ಮತ್ತು ಕೃಷಿ ವಿಶ್ವವಿದ್ಯಾಲಯದ ಜೊತೆ ಸಂಪರ್ಕವನ್ನು ಜೋಡಿಸಲಾಗಿದೆಯೇ:

ಊ) ರಾಜ್ಯದ ಎಷ್ಟು ಕೇಂದ್ರಗಳಲ್ಲಿ ಈ ಜೋಡಣೆ ಆಗಿದೆ? (ಜಿಲ್ಲಾವಾರು ವಿವರ ಒದಗಿಸುವುದು)

ಶ್ರೀ ವಿ.ಎಸ್. ಕೌಜಲಗಿ (ಕೃಷಿ ಸಚಿವರು)

ಅ) ರಾಜ್ಯದಲ್ಲಿ 745 ರೈತ ಸಂಪರ್ಕ ಕೇಂದ್ರಗಳಿವೆ.

ಆ) ಪ್ರತಿಯೊಂದು ರೈತ ಸಂಪರ್ಕ ಕೇಂದ್ರಕ್ಕೆ ಮಂಜೂರಾದ ಹುದ್ದೆಗಳು ಇಂತಿವೆ.